ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕರ್ನಾಟಕ ಪ್ರವಾಸೋದ್ಯಮ ನೀತಿ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) –

283 (468) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರವಾಸೋದ್ಯಮ ಇಲಾಖೆಯಿಂದ ಕರ್ನಾಟಕ ಪ್ರವಾಸೋದ್ಯಮ ನೀತಿ 2020-25 ಜಾರಿಗೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಪ್ರವಾಸೋದ್ಯಮ ನೀತಿಗೆ ಸಕ್ಷಮ ಪ್ರಾಧಿಕಾರದಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆಯೇ; ಅಥವಾ ಯಾವ ಕಾಲಮಿತಿಯೊಳಗೆ ಹೊರಡಿಸಲಾಗುವುದು;

(ಇ) ಚಿಕ್ಕಮಗಳೂರು ಜಿಲ್ಲೆಯ ಭದ್ರಾ ನದಿಯಲ್ಲಿ ಜಲ ಸಾಹಸ ಮತ್ತು ಭೂ ಸಾಹಸ (ಕ್ರೀಡಾ ಚಟುವಟಿಕೆಗಳನ್ನು) ಉತ್ತೇಜಿಸಲು ಸರ್ಕಾರದಿಂದ ಕೈಗೊಂಡ ಕ್ರಮ ಏನು; (ವಿವರ ನೀಡುವುದು)

(ಈ) ಜಲ ಸಾಹಸ ಮತ್ತು ಭೂ ಸಾಹಸ (ಕ್ರೀಡಾ ಚಟುವಟಿಕೆ) ನಡೆಸಲು ಪರವಾನಗಿ ನೀಡಲಾಗಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು?